ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ/65/ಸೇನಿಇ/2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 02.11.2021

ಸುತ್ತೋಲೆ

ವಿಷಯ:ಸರ್ಕಾರಿ ನೌಕರರು ಸ್ಥಿರಾಸ್ತಿ/ ಚರಾಸ್ತಿಯ ವ್ಯವಹರಣೆಯನ್ನು ವರದಿ ಮಾಡುವ ಬಗ್ಗೆ.

*****

1. ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021 (ಸಂಕ್ಷಿಪ್ತವಾಗಿ '2021ರ ನಿಯಮಗಳು'), ದಿನಾಂಕ:- 07-01-2021 ರಿಂದ ಜಾರಿಗೆ ಬಂದಿರುತ್ತದೆ.

2. 2021ರ ನಿಯಮಗಳ ನಿಯಮ 24(3) ರ ಅನುಸಾರ ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯನ್ನು ಹೊರತುಪಡಿಸಿ, ಬೇರೆ ಮೂಲಗಳಿಂದ ತನ್ನ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾವುದೇ ಸದಸ್ಯನ ಹೆಸರಿನಲ್ಲಾಗಲಿ ಗುತ್ತಿಗೆಯ, ಅಡಮಾನದ, ಖರೀದಿಯ, ಮಾರಾಟದ, ಉಡುಗೊರೆಯ ಮೂಲಕ ಅಥವಾ ಅನ್ಯಥಾ ಸ್ಥಿರ ಸ್ವತ್ತನ್ನು ಅರ್ಜಿಸುವ ಅಥವಾ ವಿಲೇ ಮಾಡುವ ಬಗ್ಗೆ ನಿಯಮಿಸಲಾದ ಪ್ರಾಧಿಕಾರಕ್ಕೆ ಮೊದಲೇ ತಿಳಿಸಬೇಕಾಗುತ್ತದೆ. ಒಂದು ವೇಳೆ ಸಮರ್ಥನೀಯ ಕಾರಣಗಳಿಂದಾಗಿ ನಿಯಮಿತ ಪ್ರಾಧಿಕಾರಿಗೆ ಮೊದಲೇ ತಿಳಿಸದೇ ಯಾವುದೇ ಸ್ಥಿರ ಸ್ವತ್ತನ್ನು ಅರ್ಜಿಸಿದ್ದಲ್ಲಿ ಅಥವಾ ವಿಲೇ ಮಾಡಿದ್ದಲ್ಲಿ ಅಂತಹ ವ್ಯವಹಾರ ಕೈಗೊಂಡ ಎರಡು ತಿಂಗಳೊಳಗಾಗಿ ವಿವರಗಳು ಹಾಗೂ ಪೂರಕ ದಾಖಲೆಗಳು ಮತ್ತು ಸಮರ್ಥನೀಯ ಕಾರಣಗಳೊಂದಿಗೆ ನಿಯಮಿತ ಪ್ರಾಧಿಕಾರಿಗೆ ವರದಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹಾಗೆ ಸರ್ಕಾರಿ ನೌಕರನು ನೀಡಿದ ಕಾರಣಗಳು ಅಂಗೀಕಾರಾರ್ಹವೆಂದು ತೃಪ್ತಿಪಟ್ಟಲ್ಲಿ, ಸರ್ಕಾರಿ ನೌಕರನು ಸಲ್ಲಿಸಿದ ದಾಖಲೆಗಳು ಹಾಗೂ ವಿವರಗಳನ್ನು ಪರಿಶೀಲಿಸಿ ಅಂತಹ ವ್ಯವಹರಣೆಯನ್ನು ಘಟನೋತ್ತರವಾಗಿ ನಿಯಮಿತ ಪ್ರಾಧಿಕಾರವು ಟಿಪ್ಪಣಿ ಮಾಡಿಕೊಳ್ಳಬಹುದಾಗಿದೆ. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ಸರ್ಕಾರಿ ನೌಕರನಿಗೆ ನಿಯಮಿಸಲಾದ ಪ್ರಾಧಿಕಾರಿಯ ಪೂರ್ವ ಮಂಜೂರಾತಿ ಅಗತ್ಯವಿರುತ್ತದೆ.

3. 2021ರ ನಿಯಮಗಳ ನಿಯಮ 24(4)ರ ಅನುಸಾರ ಸರ್ಕಾರಿ ನೌಕರನು ತನ್ನ ಸ್ವಂತ ಹೆಸರಿನಲ್ಲಾಗಲೀ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲೀ ತಾನು ಅಥವಾ ತನ್ನ ಕುಟುಂಬದ ಯಾರೇ ಸದಸ್ಯರು ಒಡೆತನ ಹೊಂದಿರುವ ಅಥವಾ ಧಾರಣ ಮಾಡಿರುವ ಚರಾಸ್ತಿಯ ಸಂಬಂಧದಲ್ಲಿ ಮಾಡುವ ಪ್ರತಿಯೊಂದು ವ್ಯವಹಾರವನ್ನು ಅಂತಹ ಸ್ವತ್ತಿನ ಮೌಲ್ಯವು ಆತನ ಮಾಸಿಕ ಮೂಲವೇತನ ಮೀರಿದರೆ ನಿಯಮಿಸಿದ ಪ್ರಾಧಿಕಾರಕ್ಕೆ ವರದಿ ಮಾಡತಕ್ಕದ್ದು. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ನಿಯಮಿಸಲಾದ ಪ್ರಾಧಿಕಾರದ ಪೂರ್ವ ಮಂಜೂರಾತಿಯ ಅಗತ್ಯವಿರುತ್ತದೆ.

4. 2021ರ ನಿಯಮಗಳ ನಿಯಮ 24(3) ಮತ್ತು 24(4)ರ ಹಿನ್ನೆಲೆಯಲ್ಲಿ ಮೇಲಿನ ಕಂಡಿಕೆಗಳಲ್ಲಿ ಸ್ಪಷ್ಟಪಡಿಸಿರುವಂತೆ ಅಗತ್ಯವಿರುವ ಪ್ರಕರಣಗಳಲ್ಲಿ ಮಾತ್ರ ಪೂರ್ವ ಮಂಜೂರಾತಿ ನೀಡಲು ನಿಯಮಿಸಿದ ಪ್ರಾಧಿಕಾರಗಳು ಕ್ರಮ ವಹಿಸಬೇಕೆಂದು ಸೂಚಿಸಿದೆ. ಈ ಸುತ್ತೋಲೆಯ ಅಂಶಗಳನ್ನು ಎಲ್ಲಾ ನಿಯಮಿಸಿದ ಪ್ರಾಧಿಕಾರಗಳು ಹಾಗೂ ಸರ್ಕಾರಿ ನೌಕರರ ಗಮನಕ್ಕೆ ತರುವಂತೆ ಸರ್ಕಾರದ ಎಲ್ಲಾ ಅಪರ ಮುಖ್ಯ/ಪ್ರಧಾನ/ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳಿಗೆ ತಿಳಿಸಿದೆ.

24/11/2021
( ನಾಗರತ್ನ ವಿ.ಪಾಟೀಲ್ )
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

---

ಕಾಶಿಇ/282/ಕಾನಿವ/ಆ&ಋಪಟ್ಟಿ/2021

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: ೦೧/೧೨/೨೦೨೧.

ಮೇಲ್ಕಂಡ ಸರ್ಕಾರದ ಸುತ್ತೋಲೆಯನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಇವರಿಗೆ: ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

1. ಕಾಲೇಜು ಶಿಕ್ಷಣ ಇಲಾಖೆಯ ಇಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಧಾರವಾಡ, ಶಿವಮೊಗ್ಗ, ಮಂಗಳೂರು, ಗುಲಬರ್ಗಾ ಮತ್ತು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
3. ಮಾನ್ಯ ಆಯುಕ್ತರು/ನಿರ್ದೇಶಕರು/ಮುಖ್ಯ ಆಡಳಿತಾಧಿಕಾರಿಗಳು/ಹೆಚ್ಚುವರಿ ನಿರ್ದೇಶಕರು/ ಜಂಟಿ ನಿರ್ದೇಶಕರು ಇವರ ಆಪ್ತ ಸಹಾಯಕರುಗಳಿಗೆ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.

1/12/21
ಕಾಲೇಜು ಶಿಕ್ಷಣ ನಿರ್ದೇಶಕರು.